ಬುಧವಾರ 20.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 29

Digital Varthe Kannada Daily Volume 01 - Issue 29 Wednesday 20.08.2025 Price: 5/- Rs 2 Pages Banga-

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಸರ್ಕಾರಿ ಶಾಲೆಗಳ ಅವೈಜ್ಞಾನಿಕವಾಗಿ ಉನ್ನತೀಕರಣ, ಹೋರಾಟ ಅನಿವಾರ್ಯ- ಹೊನ್ನಮ್ಮಗವಿ ಶ್ರೀ



### "ನಿಯಮ ಉಲ್ಲಂಘಿಸಿ ಶಾಲೆ ಪ್ರಾರಂಭಿಸುವುದು ಮರಣಶಾಸನ"

ದಾಬಸ್ ಪೇಟೆ: ಶಿಕ್ಷಣ ಒಂದು ಸೇವೆಯೆಂದು ನೂರಾರು ವರ್ಷಗಳಿಂದ ವಿದ್ಯಾದಾನ ನೀಡುತ್ತಾ ಅನುದಾನಿತ ಶಿಕ್ಷಣ ಸಂಸ್ಥೆಗಳು ಬಡ ಹಾಗೂ ಮಧ್ಯಮ ವರ್ಗದ ಆಸರೆಯಾಗಿದ್ದು, ಕರ್ನಾಟಕ ಶೈಕ್ಷಣಿಕವಾಗಿ ಅಕ್ಷರಸ್ಥವಾಗಲು ಒಂದು ಭಾಗವಾಗಿ ಸಂಘ ಸಂಸ್ಥೆಗಳು ಕೆಲಸ ಮಾಡುತ್ತಿವೆ ಸರ್ಕಾರ ಹಾಗೂ ಅಧಿಕಾರಿಗಳು ಇತ್ತೀಚೆಗೆ ತೆಗೆದುಕೊಂಡಿರುವ ನಿರ್ಧಾರದಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳು ಸಂಕಷ್ಟಕ್ಕೆ ಸಿಲುಕುತ್ತಿವೆ ಎಂದು ಹೊನ್ನಮ್ಮಗವಿ ಮಠದ ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಸೋಂಪುರ ಹೋಬಳಿಯ ಹೊನ್ನಮ್ಮಗವಿ ಮಠದ ಆವರಣದಲ್ಲಿ ಏರ್ಪಡಿಸಿದ್ದ ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಶಾಲೆಗಳ ಮುಖ್ಯಸ್ಥರು ಹಾಗೂ ಮುಖ್ಯೋಪಾಧ್ಯಯರು, ಶಿಕ್ಷಕರ ಸಭೆಯ ನೇತೃತ್ವವಹಿಸಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಸರ್ಕಾರದ ಮಾನದಂಡಗಳನ್ನು ಗಾಳಿಗೆ ತೂರಿ ಕೆಲ ಅಧಿಕಾರಿಗಳು ಇನ್ಫೋಸಿಸ್‌ನಂತಹ ಪ್ರತಿಷ್ಟಿತ ಸಂಸ್ಥೆಗಳ ಸಿಎಸ್‌ಆರ್ ನಿಧಿ ಬಳಕೆಗಾಗಿ ತಾಲ್ಲೂಕಿನ ಸೋಂಪುರ, ಬಸವನಹಳ್ಳಿ, ಸುಭಾಷ್ ನಗರ ಮತ್ತು ವೀರ ರಾಘವನಪಾಳ್ಯ ಶಾಲೆಗಳನ್ನು ಪ್ರಾರಂಭ ಮಾಡುತ್ತಿರುವುದು ಅವೈಜ್ಞಾನಿಕ

ಖಾಸಗಿ ಸಂಸ್ಥೆಗಳ ಸಿಎಸ್‌ಆರ್ ನಿಧಿ ದುರ್ಬಳಕೆ ಯಾಗಬಾರದು, ಸೋಂಪುರ ಗ್ರಾಮದಲ್ಲಿ ಸುಮಾರು ೬೪ ವರ್ಷಗಳಿಂದ ಸಿವಿಜಿ ಪ್ರೌಢಶಾಲೆ ಸರ್ಕಾರದ ಅನುದಾನ ಕೊಳಪಟ್ಟು ನಡೆಯುತ್ತಿದ್ದರೂ ಸೋಂಪುರ ಹಿರಿಯ ಪ್ರಾಥಮಿಕ ಶಾಲೆಯನ್ನು ಪ್ರೌಢ ಶಾಲೆಯಾಗಿ ಉನ್ನತೀಕರಿಸಿರುವುದು ಸರಿಯಲ್ಲ, ಬೇರೆ ತಾಲ್ಲೂಕಿನಲ್ಲಿ ಅಧಿಕಾರಿಗಳು ಅನುದಾನಿತ ಶಾಲೆ ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನವನ್ನು ಸೆಳೆದು ಮತ್ತೊಂದು ಸ್ಥಳದಲ್ಲಿ ಶಾಲೆಯನ್ನು ಪ್ರಾರಂಭ ಮಾಡುವಂತೆ ಮಾಡಿದ್ದು ಆದರೆ ನೆಲಮಂಗಲ ತಾಲ್ಲೂಕಿನಲ್ಲಿ ಒಂದು ಕಿಲೋಮೀಟರ್ ವ್ಯಾಪ್ತಿಗೂ ಹತ್ತಿರವಿರುವ ಕಡೆ ಮತ್ತೊಂದು ಸರ್ಕಾರಿ ಶಾಲೆಯನ್ನು ಪ್ರಾರಂಭ ಮಾಡುವುದು ಸರ್ಕಾರಿ ಅನುದಾನಿತ ಶಾಲೆಗಳಿಗೆ ಮರಣಶಾಸನವಾಗಿದ್ದು, ೨೦೦೩ ರಲ್ಲಿ ಹೈಕೋರ್ಟ್ ಅನುದಾನಿತ ಶಾಲೆ ಇರುವ ೩ ಕಿ.ಮೀ ಅಂತರದಲ್ಲಿ ಯಾವುದೇ ಶಾಲೆಯನ್ನ ಪ್ರಾರಂಭ ಮಾಡಬಾರದಾಗಿ ಸೂಚಿಸಿದರೂ ಕೂಡ ಅಧಿಕಾರಿಗಳು ನಿಯಮ ಗಾಳಿಗೆ ತೂರಿ ಶಾಲೆ ಉನ್ನತೀಕರಿಸುವ ನಿರ್ಧಾರಕ್ಕೆ ಕಾರಣವೇನು?


ಇದರಿಂದ ಅನುದಾನಿತ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಅನ್ಯಾಯ ಮಾಡಿದಂತೆ ಆಗುತ್ತದೆ, ಆದ್ದರಿಂದ ಅಧಿಕಾರಿಗಳು ಮತ್ತೊಮ್ಮೆ ಪರಿಶೀಲಿಸಿ ನೆಲಮಂಗಲ ತಾಲೂಕಿನಲ್ಲಿ ಅನುದಾನಿತ ಶಾಲಾ ಶಿಕ್ಷಕರಿಗಾಗುವ ಅನ್ಯಾಯವನ್ನು ತಪ್ಪಿಸಿ ಸೂಕ್ತ ಸ್ಥಳಗಳಲ್ಲಿ ಶಾಲೆಗಳನ್ನು ಪ್ರಾರಂಭ ಮಾಡುವುದು ಒಳ್ಳೆಯದು ಇಲ್ಲವಾದಲ್ಲಿ ಮುಂದೆ ಉಗ್ರ ಪ್ರತಿಭಟನೆ ಮಾಡಬೇಕಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಬೆಂ.ಗ್ರಾ ಜಿಲ್ಲಾ ಫ್ರೌಢಶಾಲಾ ಮುಖ್ಯೋಪಾಧ್ಯಯರ ಮತ್ತು ಉಪಪ್ರಾಂಶುಪಾಲರ ಸಂಘದ ಅಧ್ಯಕ್ಷ ಟಿ.ಕೆ ರವಿಕುಮಾರ್ ಮಾತನಾಡಿ ನಾವು ಸರ್ಕಾರ ಅಥವಾ ಅಧಿಕಾರಿಗಳ ವಿರೋಧವಲ್ಲ, ದಾನಿಗಳ ನೆರವು ಹಾಗೂ ಸರ್ಕಾರದ ಅನುದಾನದಿಂದ ಶಾಲೆಗಳನ್ನು ನಡೆಸಿಕೊಂಡು ಬರುತ್ತಿದ್ದೇವೆ ಹಾಗೂ ಶಾಲೆಗಳನ್ನು ಕೆಳಹಂತದಿAದ ಮೇಲ್ದರ್ಜೆಗೆ ತರುವಲ್ಲಿ ಶ್ರಮಿಸಿದ್ದೇವೆ. ಅನುದಾನಿತ ಶಾಲೆ ಇರುವಲ್ಲಿ ಸರ್ಕಾರ ಫ್ರಾಥಮಿಕ ಶಾಲೆಗಳನ್ನು ಉನ್ನತೀಕರಿಸುವ ನಿರ್ಧಾರದ ವಿರುದ್ಧ ೨೦೦೩ರಲ್ಲಿ ಉಚ್ಚನ್ಯಾಯಾಲಯದಲ್ಲಿ ಕಾನೂನು ಹೋರಾಟ ಮಾಡಿದ್ದೆವು ಈಗ ಮತ್ತೆ ಇಂತಹ ಸ್ಥಿತಿ ನಿರ್ಮಾಣವಾಗಿದ್ದು ಇನ್ಫೋಸಿಸ್‌ನಂತಹ ಪ್ರತಿಷ್ಟಿತ ಕಂಪನಿಯ ಸಿಎಸ್‌ಆರ್ ನಿಧಿಯೂ ದುರ್ಬಳಕೆಯಾಗುತ್ತದೆ.

ಜಿಲ್ಲೆಯ ಸರ್ಕಾರಿ, ಅನುದಾನಿತ ಅನುದಾನರಹಿತ ಫ್ರೌಢಶಾಲೆಗಳಿಗೆ ತೊಂದರೆಯಾಗದA ತೆ ಎಂಎಲ್‌ಸಿ ಪುಟ್ಟಣ್ಣರವರು ನಮಗೆ ಧ್ವನಿಯಾಗಿದ್ದು ಮುಂದೆ ಅವರ ಸಹಕಾರ ಪಡೆದು ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇವೆ ಕೂಡಲೇ ಅಧಿಕಾರಿಗಳು ನಮಗೆ ಬೆಂಬಲ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಮೇಲಣಗವಿಮಠದ ಡಾ.ಶ್ರೀ ಮಲಯಶಾಂತಮುನಿ ದೇಶೀಕೇಂದ್ರ ಸ್ವಾಮೀಜಿ, ಮುಖ್ಯೋಪಾಧ್ಯಯರ ಮತ್ತು ಉಪಪ್ರಾಂಶುಪಾಲರ ಸಂಘದ ಪ್ರತಿನಿಧಿಗಳಾದ ಬಸವರಾಜು, ಅಂಜನಮೂರ್ತಿ ಮುಖ್ಯಶಿಕ್ಷಕರುಗಳಾದ ಆರ್.ಸಿದ್ದರಾಜಯ್ಯ, ಹರೀಶ್, ರೇಣುಕಾರಾಧ್ಯ, ಸೋಮಶೇಖರ್, ವಿಜಯ್ ಕುಮಾರ್, ವೆಂಕಟೇಶ್ ರೆಡ್ಡಿ, ವಿಶ್ವನಾಥ್ ಸೇರಿದಂತೆ ಅನೇಕ ಶಿಕ್ಷಕರು ಉಪಸ್ಥಿತರಿದ್ದರು.

## ತಿರುಪತಿ ತಿಮ್ಮಪ್ಪನಿಗೆ 140 ಕೋಟಿ ರೂ. ಮೌಲ್ಯದ 121 ಕೆಜಿ ಚಿನ್ನ ಕಾಣಿಕೆ!



### ಉದ್ಯಮಿಯೊಬ್ಬರಿಂದ 140 ಕೋಟಿ ರೂ. ಮೌಲ್ಯದ ಭಕ್ತಿ ನಮನ

ಅಮರಾವತಿ: ಉದ್ಯಮಿಯೊಬ್ಬರು ತಿರುಪತಿ ವೆಂಕಟೇಶ್ವರ ಸ್ವಾಮಿ ದೇವಸ್ಥಾನಕ್ಕೆ 140 ಕೋಟಿ ರೂ. ಮೌಲ್ಯದ 121 ಕೆಜಿ ಚಿನ್ನ ಕಾಣಿಕೆ ನೀಡುತ್ತಿದ್ದಾರೆ ಎಂದು ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಮಂಗಳವಾರ ತಿಳಿಸಿದ್ದಾರೆ. ತಮ್ಮ ಉದ್ಯಮದ ಯಶಸ್ಸಿನ ಪ್ರತೀಕವಾಗಿ ತಿರುಪತಿ ವೆಂಕಟೇಶ್ವರ ಸ್ವಾಮಿಗೆ 121 ಕೆಜಿ ಬಂಗಾರವನ್ನು ಕಾಣಿಕೆಯಾಗಿ ನೀಡುವುದಾಗಿ ಅವರು ಹರಕೆ ಹೊತ್ತಿದ್ದಾರೆ ಎಂದು ನಾಯ್ಡು ಹೇಳಿದ್ದಾರೆ.

'ಬಡತನ ನಿರ್ಮೂಲನೆ' ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಆಂಧ್ರ ಸಿಎಂ, ವೆಂಕಟೇಶ್ವರ ಸ್ವಾಮಿಯ ಭಕ್ತರೊಬ್ಬರು ಕಂಪನಿ ಸ್ಥಾಪಿಸಲು ಬಯಸಿದ್ದರು ಮತ್ತು ಅದರಂತೆ ಕಂಪನಿ ಸ್ಥಾಪಿಸಿ ತಿಮ್ಮಪ್ಪನ ಆಶೀರ್ವಾದದಿಂದ ಯಶಸ್ವಿಯಾದರು. ಈಗ ದೈವಾನುಗ್ರಹದಿಂದ ದೊರೆತ ಈ ಯಶಸ್ಸಿಗೆ ಕೃತಜ್ಞತೆ ಸಲ್ಲಿಸಲು ಅವರು ಮುಂದಾಗಿದ್ದಾರೆ. ಅದಕ್ಕಾಗಿ 121 ಕೆಜಿ ಬಂಗಾರವನ್ನು ಸ್ವಾಮಿಗೆ ಅರ್ಪಿಸುತ್ತಿದ್ದಾರೆ ಎಂದರು.

ತಮ್ಮ ಗುರುತನ್ನು ಬಹಿರಂಗಪಡಿಸಲು ಇಚ್ಛಿಸದ ಆ ಭಕ್ತ, ತಮ್ಮ ಕಂಪನಿಯ ಶೇ. 60 ರಷ್ಟು ಷೇರುಗಳನ್ನು ಮಾರಾಟ ಮಾಡುವ ಮೂಲಕ 1.5 ಬಿಲಿಯನ್ ಯುಎಸ್ ಡಾಲರ್ ಅಥವಾ ಸುಮಾರು 6,000 ಕೋಟಿಯಿಂದ 7,000 ಕೋಟಿ ರೂ.ಗಳವರೆಗೆ ಗಳಿಸಿದ್ದಾರೆ.ತಮಗೆ ಈ ಸಂಪತ್ತನ್ನು ಶ್ರೀ ವೆಂಕಟೇಶ್ವರ ಸ್ವಾಮಿಯೇ ಕರುಣಿಸಿದ್ದಾರೆ ಎಂಬ ನಂಬಿಕೆಯಿಂದ ಅವರು ಇದೀಗ ಈ ಬೃಹತ್ ದೇಣಿಗೆಯನ್ನು ನೀಡಲು ನಿರ್ಧರಿಸಿದ್ದಾರೆ ಎಂಬುದಾಗಿ ಚಂದ್ರಬಾಬು ನಾಯ್ಡು ಮಾಹಿತಿ ನೀಡಿದರು.

ತಿರುಪತಿಯಲ್ಲಿ ಪ್ರತಿದಿನ ಶ್ರೀ ವೆಂಕಟೇಶ್ವರ ಸ್ವಾಮಿಯ ವಿಗ್ರಹವನ್ನು ಸುಮಾರು 120 ಕೆಜಿ ತೂಕದ ಚಿನ್ನದ ಆಭರಣಗಳಿಂದ ಅಲಂಕರಿಸಲಾಗುತ್ತದೆ. ಈ ವಿಷಯವನ್ನು ತಿಳಿದುಕೊಂಡ ಆ ಅನಾಮಧೇಯ ಭಕ್ತರು, ಅದಕ್ಕಿಂತ ಒಂದು ಕೆಜಿ ಹೆಚ್ಚಿಗೆ, ಅಂದರೆ 121 ಕೆಜಿ ಚಿನ್ನ ದಾನ ಮಾಡಲು ಮುಂದಾಗಿದ್ದಾರೆ ಎಂದು ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರು ವಿವರಿಸಿದರು.

## ಬಸ್-ರೈಲ್ವೆ ನಿಲ್ದಾಣಗಳಲ್ಲಿ AED ಸಾಧನ ಅಳವಡಿಕೆಗೆ

ಬೆಂಗಳೂರು: ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ಸಹಾಯ ಮಾಡಲು ಬಸ್ ನಿಲ್ದಾಣಗಳು ಮತ್ತು ರೈಲು ನಿಲ್ದಾಣಗಳಲ್ಲಿ 'ಆಟೊಮೇಟೆಡ್ ಎಕ್ಸ್‌ಟರ್ನಲ್ ಡಿಫೈಬ್ರಿಲ್ಲೇಟರ್ಸ್ (ಎಇಡಿ)' ಸಾಧನ ಅಳವಡಿಸುವ ಯೋಜನೆ ಜಾರಿಗೆ ತರಲು ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿದೆ.

ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಕುರಿತ ವಿಧಾನ ಪರಿಷತ್ ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು, ಈ ಪ್ರಕರಣಗಳು ಸಾಮಾನ್ಯವಾಗಿ ಮಧುಮೇಹ, ಬಿಪಿ, ಮಾಲಿನ್ಯ, ಒತ್ತಡ, ಬೊಜ್ಜು ಮತ್ತು ಜಡ ಜೀವನಶೈಲಿಗೆ ಸಂಬಂಧಿಸಿದ್ದಾಗಿರುತ್ತವೆ. ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ಮೂಲಕ ಈ ಲಕ್ಷಣಗಳನ್ನು ಹೊಂದಿರುವವರನ್ನು ಗುರುತಿಸಲು ಕ್ರಮ ಕೈಗೊಳ್ಳಲಾಗುವುದು. ಸಮಸ್ಯೆಗಳನ್ನು ನಿವಾರಿಸಲು ಅವರಿಗೆ ಔಷಧಿಗಳನ್ನು ನೀಡಲಾಗುವುದು ಎಂದು ಹೇಳಿದರು.

ಹೃದಯ ಜ್ಯೋತಿ ಯೋಜನೆಯಡಿ, ರಾಜ್ಯಾದ್ಯಂತ ಟೆಲಿ ಇಸಿಜಿ ಸೌಲಭ್ಯಗಳನ್ನು ಸ್ಥಾಪಿಸಲಾಗುವುದು. ಹೃದಯಾಘಾತದ ಸಂದರ್ಭದಲ್ಲಿ, ತಕ್ಷಣದ ಪರಿಹಾರಕ್ಕಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ 25,000 ರೂ. ಮೌಲ್ಯದ ಟೆನೆಕ್ಟೆಪ್ಲೇಸ್ ಇಂಜೆಕ್ಷನ್ ಅನ್ನು ಉಚಿತವಾಗಿ ನೀಡಲಾಗುತ್ತದೆ ಎಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಅವರು ಮಾತನಾಡಿ, ಯುವಕರಲ್ಲಿ ಹೃದಯಾಘಾತ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆಯ ಅವುಗಳನ್ನು ತಡೆಗಟ್ಟಲು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಹೃದಯಾಘಾತ ಪ್ರಕರಣಗಳ ಮಾದರಿಯನ್ನು ಎರಡು ತಿಂಗಳ ಕಾಲ ಗಮನಿಸಲಾಗಿದೆ. ಹೃದಯಾಘಾತ ಪ್ರಕರಣಗಳನ್ನು ಕೋವಿಡ್ -19 ನೊಂದಿಗೆ ಜೋಡಿಸುವುದು ಸರಿಯಲ್ಲ ಎಂದು ಹೇಳಿದರು.

ಹೃದಯಘಾತ ಪ್ರಕರಣಗಳ ಕುರಿತಂತೆ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕ ಡಾ. ರವೀಂದ್ರ ಅವರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಾರ್ಯಪಡೆಯನ್ನು ಸಹ ರಚಿಸಿತ್ತು. ಸರಕಾರಕ್ಕೆ ನೀಡಿರುವ ವರದಿಯಲ್ಲಿ ಜನರ ಊಹೆಗೂ ಇದಕ್ಕೂ ಸಂಬಂಧವಿಲ್ಲ ಎಂದು ಉಲ್ಲೇಖಿಸಲಾಗಿದೆ. ಜನರು ವದಂತಿಗಳಿಗೆ ಕಿವಿಗೊಡುವುದನ್ನು ನಿಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ರಾಜ್ಯದ ಎಲ್ಲ ಸರಕಾರಿ ಆಸ್ಪತ್ರೆಗಳ ಜೊತೆ ಕಡ್ಡಾಯವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಬೇಕೆಂಬ ಉದ್ದೇಶ ಸರಕಾರಕ್ಕಿದೆ. ಈಗಾಗಲೇ ಅನೇಕ ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳು ಕಾರ್ಯಾರಂಭ ಮಾಡಿವೆ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಲ್ಲ ಜಿಲ್ಲಾಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಸ್ಥಾಪನೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ಕೊಟ್ಟಿದ್ದಾರೆ. ಈ ನಿಯಮವನ್ನು ನಾವು ಈಗಾಗಲೇ ಅಳವಡಿಸಿಕೊಂಡು ಕಾರ್ಯಾರಂಭ ಮಾಡಿದ್ದೇವೆ. ಎಲ್ಲ ಜಿಲ್ಲೆಗಳಲ್ಲೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಜೊತೆಗೆ ಟ್ರಾಮಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು. ಸರ್ಕಾರವು ಎಂಟು ತಿಂಗಳಲ್ಲಿ ಹುಬ್ಬಳ್ಳಿಯಲ್ಲಿ ಹೃದ್ರೋಗ ಚಿಕಿತ್ಸಾ ಘಟಕವನ್ನು ಮತ್ತು ಎರಡು ತಿಂಗಳಲ್ಲಿ ಬೆಳಗಾವಿಯಲ್ಲಿ ಮತ್ತೊಂದು ಹೃದ್ರೋಗ ಘಟಕವನ್ನು ತೆರೆಯಲಿದೆ ಎಂದು ಹೇಳಿದರು.

## GBA ತಿದ್ದುಪಡಿ ವಿಧೇಯಕ ಅಂಗೀಕಾರ



### ಪಾಲಿಕೆಗಳ ಸ್ವಾಯತ್ತತೆ ಕಾಯ್ದುಕೊಂಡ ಸರ್ಕಾರ – ಡಿಕೆ ಶಿವಕುಮಾರ್ ಸ್ಪಷ್ಟನೆ

ಬೆಂಗಳೂರು: 2025ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆ ಮಂಗಳವಾರ ಅಂಗೀಕರಿಸಿತು. ಬೆಂಗಳೂರು ನಗರಾಭಿವೃದ್ಧಿ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸದನದಲ್ಲಿ ವಿಧೇಯಕವನ್ನು ಮಂಡಿಸಿದರು. ವಿರೋಧ ಪಕ್ಷದ ನಾಯಕರು, ಶಾಸಕರು ಕೆಲಹೊತ್ತು ವಿಧೇಯಕ ಕುರಿತು ಚರ್ಚೆ ನಡೆಸಿದ ಬಳಿಕ ಅನುಮೋದನೆ ನೀಡಲಾಯಿತು.

ಬೆಂಗಳೂರು ಆಡಳಿತ ತಿದ್ದುಪಡಿ ಮಸೂದೆ ಅಂಗೀಕಾರಗೊಂಡಿದ್ದರೂ ಕೆಲವರು ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಹೀಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಐದು ಹೊಸ ಪಾಲಿಕೆಗಳ ವಿಚಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂಬ ಅಂಶವನ್ನು ಈ ವಿಧೇಯಕದಲ್ಲಿ ಸ್ಪಷ್ಟಪಡಿಸಲಾಗಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಸದ್ಯದ ಕಾಯ್ದೆ ಪ್ರಕಾರ ಬೃಹತ್ ಬೆಂಗಳೂರು ಪ್ರಾಧಿಕಾರವು ಅಂತಹ ಅಧಿಕಾರವನ್ನು ಚಲಾಯಿಸುತ್ತದೆ ಮತ್ತು ಈ ಕಾಯಿದೆಯಡಿಯಲ್ಲಿ ರಚಿಸಲಾದ ನಗರ ನಿಗಮಗಳಿಗೆ ಸಂಬಂಧಿಸಿದಂತೆ ಈ ಕಾಯಿದೆಯ ನಿಬಂಧನೆಗಳ ಪ್ರಕಾರ ಅಂತಹ ಕಾರ್ಯಗಳನ್ನು ನಿರ್ವಹಿಸುತ್ತದೆ ಎಂದು ಅವರು ಹೇಳಿದರು. ಪಾಲಿಕೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಣೆ: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ರಚಿಸಲಾಗಿರುವ ಪಾಲಿಕೆಗಳ ವಿಚಾರದಲ್ಲಿ ಪ್ರಾಧಿಕಾರ ಹಸ್ತಕ್ಷೇಪ ಮಾಡಲು ಅವಕಾಶವಿದೆ ಎಂದು ಯಾರೋ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದಾರೆ.

- ಗ್ರೇಟರ್ ಬೆಂಗಳೂರು ತಿದ್ದುಪಡಿ ವಿಧೇಯಕ ಅಂಗೀಕಾರ
- ಪಾಲಿಕೆಗಳು ಸ್ವಾಯತ್ತ, ಸರ್ಕಾರ ನೇರ ನಿಯಂತ್ರಣವಿಲ್ಲ
- ಮೇಯರ್, ಉಪಮೇಯರ್ ಅವಧಿ 30 ತಿಂಗಳು

ಪಾಲಿಕೆಗಳನ್ನು ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಳ್ಳಲಾಗುತ್ತಿದೆ ಎಂದು ಆಕ್ಷೇಪಿಸಲಾಗಿದೆ. ಹೀಗಾಗಿ ಈ ಅಂಶವನ್ನು ಪ್ರಸ್ತುತ ತಿದ್ದುಪಡಿ ವಿಧೇಯಕದಲ್ಲಿ ತೆಗೆದುಹಾಕಲಾಗಿದೆ. ಪಾಲಿಕೆಗಳನ್ನು ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಳ್ಳುವುದಿಲ್ಲ. ಪಾಲಿಕೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಿಸಲಿವೆ. ಪಾಲಿಕೆಗಳ ಕಾರ್ಯ ಚಟುವಟಿಕೆಗಳಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹಸ್ತಕ್ಷೇಪ ಇಲ್ಲ ಎಂಬ ಸ್ಪಷ್ಟನೆ ನೀಡಲು ಈ ತಿದ್ದುಪಡಿ ತರಲಾಗಿದೆ ಎಂದು ಅವರು ಸದನಕ್ಕೆ ತಿಳಿಸಿದರು.

ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024 ಅಡಿಯಲ್ಲಿ ಹೊಸದಾಗಿ ಐದು ನಗರ ಪಾಲಿಕೆಗಳನ್ನು ಸರ್ಕಾರ ನಿರ್ಧರಿಸಿದೆ. ಇವುಗಳ ಸಮನ್ವಯಕ್ಕಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಗೂ ವಿಧೇಯಕ ಅವಕಾಶ ಒದಗಿಸಿದೆ. ಮೇಯರ್ ಮತ್ತು ಉಪ ಮೇಯರ್‌ಗೆ 30 ತಿಂಗಳ ಅವಧಿಯನ್ನು ಒದಗಿಸುತ್ತದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಮುಖ್ಯಮಂತ್ರಿ ಅಧ್ಯಕ್ಷರಾಗಿದ್ದರೆ, ಬೆಂಗಳೂರಿನ ಅಭಿವೃದ್ಧಿ ಸಚಿವರು ಪದ ನಿಮಿತ್ತ ಉಪಾಧ್ಯಕ್ಷರಾಗಿರುತ್ತಾರೆ.

ಚರ್ಚೆ ವೇಳೆ ಪಾಲಿಕೆಗಳ ಆಡಳಿತದಲ್ಲಿ ಹಸ್ತಕ್ಷೇಪಕ್ಕೆ ಗ್ರೇಟರ್ ಬೆಂಗಳೂರು ಕಾಯ್ದೆ ಅವಕಾಶ ನೀಡಬಹುದು ಎಂಬ ಬಿಜೆಪಿ ಶಾಸಕರಾದ ಡಾ.ಸಿ.ಎನ್. ಅಶ್ವತ್ಥ ನಾರಾಯಣ ಹಾಗೂ ಸತೀಶ್ ರೆಡ್ಡಿ ಅವರ ಆಕ್ಷೇಪಕ್ಕೆ ಉತ್ತರಿಸಿದ ಡಿಕೆ ಶಿವಕುಮಾರ್, ಐದು ನಗರ ಪಾಲಿಕೆಗಳ ಚುನಾವಣೆ ಮುಗಿದ ನಂತರ ಹೊಸ ಪ್ರದೇಶಗಳನ್ನು ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಸೇರಿಸಲಾಗುವುದು ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಒಂದು ವೇಳೆ ಹಳ್ಳಿಗಳನ್ನು ಹೊಸ ಪ್ರದೇಶಗಳಾಗಿ ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಸೇರಿಸಿದರೆ ಪಂಚಾಯಿತಿ ಸದಸ್ಯರು ಕಾರ್ಪೋರೇಟ್ ಸದಸ್ಯರಾಗಬಹುದು. ಚುನಾವಣೆ ಮುಗಿದ ನಂತರ ಪಂಚಾಯಿತಿ ಸದಸ್ಯರು ಕಾರ್ಪೋರೇಟರ್ ಆಗಬಹುದು ಎಂದು ಅವರು ಹೇಳಿದರು.

**ಇಂಗ್ಲೀಷ್ ಪದಕ್ಕೆ ಆಕ್ಷೇಪ:** 'ಗ್ರೇಟರ್ ಬೆಂಗಳೂರು' ಎಂಬ ಇಂಗ್ಲೀಷ್ ಪದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಕನ್ನಡ ಪದವನ್ನು ಯಾಕೆ ಆಯ್ಕೆ ಮಾಡಲಿಲ್ಲ? ಎಂದು ಉಪ ಮುಖ್ಯಮಂತ್ರಿ ಅವರನ್ನು ಕೇಳಿದರು. ಬೃಹತ್ ಬೆಂಗಳೂರು ಪ್ರಾಧಿಕಾರ ರಚನೆಯು "ವಿಕೇಂದ್ರೀಕರಣದ ಮೇಲಿನ ದಾಳಿಯಾಗಿದ್ದು, ಇದು ಪಾಲಿಕೆಗಳ ಸ್ವಾತಂತ್ರ್ಯವನ್ನು ಕಿತ್ತುಕೊಂಡು, ಅವುಗಳನ್ನು ಸರ್ಕಾರದ ಮೇಲೆ ಅವಲಂಬಿತವಾಗಿಸುತ್ತದೆ ಎಂದು ಆರೋಪಿಸಿದರು.

ಇದಕ್ಕೆ ಉತ್ತರಿಸಿದ ಕಾಂಗ್ರೆಸ್ ಶಾಸಕ ರಿಜ್ವಾನ್ ಅರ್ಷದ್, ಬೃಹತ್ ಬೆಂಗಳೂರು ಪ್ರಾಧಿಕಾರವು ಪಾಲಿಕೆಗಳ ನಡುವೆ ಮಾತ್ರ ಸಮನ್ವಯ ಸಾಧಿಸುತ್ತದೆ. ಐದು ನಿಗಮಗಳು ಸಂಪೂರ್ಣವಾಗಿ ಸ್ವಾಯತ್ತವಾಗಿರುತ್ತವೆ, ತಮ್ಮ ತೆರಿಗೆಗಳನ್ನು ಸಂಗ್ರಹಿಸಲು ಮತ್ತು ಸಂಗ್ರಹಿಸಿದ ತೆರಿಗೆಯನ್ನು ಖರ್ಚು ಮಾಡಲು ಸ್ವತಂತ್ರವಾಗಿರುತ್ತವೆ ಎಂದು ಹೇಳಿದರು.

## ಚಾಮರಾಜನಗರದ ಗುಹೆಯೊಳಗೆ ಹೆಣ್ಣು ಚಿರತೆ ಸಾವು!

ಚಾಮರಾಜನಗರ: ಬನ್ನೇರುಘಟ್ಟ ಸಫಾರಿ ಮೇಲೆ ಚಿರತೆ ದಾಳಿ ಪ್ರಕರಣ ಹಸಿರಾಗಿರುವಂತೆಯೇ ಅತ್ತ ಚಾಮರಾಜನಗರದಲ್ಲಿ ಹೆಣ್ಣು ಚಿರತೆ ಸಾವನ್ನಪ್ಪಿರುವ ಘಟನೆ ವರದಿಯಾಗಿದೆ.ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕಾವೇರಿ ವನ್ಯಜೀವಿ ವಿಭಾಗದ ಬಂಡೆಯ ಗುಹೆಯೊಳಗೆ ಹೆಣ್ಣು ಚಿರತೆಯ ಮೃತ ಪಟ್ಟಿದೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ಹನೂರು ವನ್ಯಜೀವಿ ವಲಯದ ಮೇಕೆದಾಟು ಅರಣ್ಯ ಪ್ರದೇಶದಲ್ಲಿ ಸುಮಾರು ಐದು-ಆರು ವರ್ಷ ವಯಸ್ಸಿನ ಚಿರತೆ ಮೃತ ಪಟ್ಟಿದೆ. ಹಿರಿಯ ಅರಣ್ಯ ಅಧಿಕಾರಿಯೊಬ್ಬರು ಆಗಸ್ಟ್ 17 ರಂದು ಇಲಾಖೆ ಸಿಬ್ಬಂದಿ ಗಸ್ತು ತಿರುಗುತ್ತಿದ್ದಾಗ ಬಂಡೆಯ ಗುಹೆಯೊಳಗೆ ಚಿರತೆ ಮೃತಪಟ್ಟಿರುವುದು ಕಂಡುಬಂದಿದೆ ಎಂದು ಅವರು ತಿಳಿಸಿದ್ದಾರೆ.ಪ್ರಸ್ತುತ ಚಿರತೆಯ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ಶವಪರೀಕ್ಷೆ ವರದಿ ಮಾತ್ರ ಸಾವಿಗೆ ನಿಖರವಾದ ಕಾರಣವನ್ನು ಕಂಡುಹಿಡಿಯಲು ಸಾಧ್ಯ ಎಂದು ಅಧಿಕಾರಿ ಹೇಳಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಧರ್ಮಸ್ಥಳ ಪ್ರಕರಣ; ಕಾಂಗ್ರೆಸ್ ಸಂಸದ ಶಶಿಕಾಂತ್ ಸೆಂಥಿಲ್ ಕೈವಾಡ: ಜನಾರ್ಧನ ರೆಡ್ಡಿ



ಬೆಂಗಳೂರು: ದೇಶಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವ ಧರ್ಮಸ್ಥಳ ಪ್ರಕರಣದಲ್ಲಿ ದೊಡ್ಡ ಷಡ್ಯಂತ್ರ ನಡೆದಿದ್ದು, ಇದರಲ್ಲಿ ಕಾಂಗ್ರೆಸ್ ಸಂಸದ ಹಾಗೂ ಮಾಜಿ ಐಎಎಸ್ ಅಧಿಕಾರಿ ಶಶಿಕಾಂತ್ ಸೆಂಥಿಲ್ (Sasikanth Senthil) ಕೈವಾಡವಿದೆ ಎಂದು ಶಾಸಕ ಜನಾರ್ಧನ ರೆಡ್ಡಿ ಗಂಭೀರ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಈ ಕುರಿತು ಮಾತನಾಡಿದ ಜನಾರ್ಧನ ರೆಡ್ಡಿ, ಧರ್ಮಸ್ಥಳ ದೇವಸ್ಥಾನದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರದ ಹಿಂದೆ ತಮಿಳುನಾಡಿನ ಕಾಂಗ್ರೆಸ್ ಸಂಸದ ಹಾಗೂ ಮಾಜಿ ಐಎಸ್ ಅಧಿಕಾರಿ ಸಸಿಕಾಂತ್ ಸೆಂಥಿಲ್ ಅವರ ಕೈವಾಡವಿದೆ. ಈ ಸಂಪೂರ್ಣ ಪ್ರಕರಣದ ಹಿಂದಿನ ಮಾಸ್ಟರ್ ಮೈಂಡ್ ಸಸಿಕಾಂತ್ ಸೆಂಥಿಲ್ ಎಂದು ಗಂಭೀರ ಆರೋಪ ಮಾಡಿದ್ದಾರೆ.

'ದಕ್ಷಿಣ ಕನ್ನಡದ ಇಬ್ಬರು ವ್ಯಕ್ತಿಗಳೊಂದಿಗೆ ಸಸಿಕಾಂತ್ ಸೆಂಥಿಲ್ ಸೇರಿ ಧರ್ಮಸ್ಥಳಕ್ಕೆ ಕೆಟ್ಟ ಹೆಸರು ತರುವ ಉದ್ದೇಶದಿಂದ ಕಾರ್ಯಸೂಚಿಗಳನ್ನು ಸಿದ್ಧಪಡಿಸಿದ್ದಾರೆ. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳಿಗೆ ಈ ಪ್ರಕರಣದಲ್ಲಿ ಆಸಕ್ತಿ ಇರಲಿಲ್ಲವಾದರೂ, ಹೈಕಮಾಂಡ್‌ನ ಒತ್ತಡ ತಂದು ಎಸ್‌ಐಟಿ ತನಿಖೆ ಮಾಡಿಸಲಾಗಿದೆ. ಎಡಪಂಥೀಯ ನಿಲುವುಗಳನ್ನು ಹೊಂದಿರುವ ಸಸಿಕಾಂತ್ ಸೆಂಥಿಲ್ ಅವರನ್ನು ತನಿಖೆಗೆ ಒಳಪಡಿಸಬೇಕು ಎಂದು ಜನಾರ್ದನ ರೆಡ್ಡಿ ಆಗ್ರಹಿಸಿದ್ದಾರೆ.

ಈ ಪ್ರಕರಣದ ಬಗ್ಗೆ ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು, ಇಲ್ಲವೇ ಸಿಬಿಐ ತನಿಖೆ ನಡೆಸುವ ಅಗತ್ಯವಿದೆ ಎಂದು ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

**ಬಿವೈ ವಿಜಯೇಂದ್ರ ಆಗ್ರಹ:** ಇನ್ನು ಇದೇ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, 'ಧರ್ಮಸ್ಥಳ ದೇವಸ್ಥಾನದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರದಲ್ಲಿ ಸಸಿಕಾಂತ್ ಸೆಂಥಿಲ್ ಅವರ ಕೈವಾಡವಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಈ ಹಿನ್ನೆಲೆಯಲ್ಲಿ, ದೇವಸ್ಥಾನದ ಘನತೆಗೆ ಧಕ್ಕೆ ತರುವಂತಹ ಕೆಲಸಗಳು ನಡೆದಿವೆ ಎಂದು ಹಲವರು ಆತಂಕ ವ್ಯಕ್ತಪಡಿಸಿದ್ದಾರೆ. ಈ ಷಡ್ಯಂತ್ರದ ಬಗ್ಗೆಯೂ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಅಂತೆಯೇ ಸದ್ಯ ಸದನದಲ್ಲಿ ಗೃಹ ಸಚಿವರು ಈ ವಿಷಯದ ಬಗ್ಗೆ ಮಾತನಾಡಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಣ್ಣ ಪೋಸ್ಟ್‌ಗಳನ್ನು ಹಾಕಿದ್ದಕ್ಕಾಗಿ ಮಂಡ್ಯ ಮತ್ತು ತುಮಕೂರು ಘಟನೆಗಳಲ್ಲಿ ಸರ್ಕಾರವು 3-4 ಗಂಟೆಗಳಲ್ಲಿ ಕ್ರಮ ಕೈಗೊಂಡಿತ್ತು. ಆದರೆ, ಧರ್ಮಸ್ಥಳದಂತಹ ಹಿಂದೂ ಧಾರ್ಮಿಕ ಸ್ಥಳಗಳಿಗೆ ಧಕ್ಕೆ ಬಂದಾಗ ಸರ್ಕಾರ ಯಾಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಪ್ರಶ್ನೆ ಮಾಡಿದ್ದಾರೆ. ಕೆಲವರು, ಇದು ಷಡ್ಯಂತ್ರ ಮಾಡಿದವರ ಓಲೈಕೆ ಮಾಡುವ ಸರ್ಕಾರದ ಪ್ರಯತ್ನವೇ ಎಂಬ ಅನುಮಾನ ವ್ಯಕ್ತಪಡಿಸಿದ್ದಾರೆ.

**ಯಾರು ಈ ಸಸಿಕಾಂತ್ ಸೆಂಥಿಲ್?:** ಪ್ರಸ್ತುತ ತಮಿನಾಡಿದ ತಿರುವಲ್ಲೂರು ಕ್ಷೇತ್ರದ ಕಾಂಗ್ರೆಸ್ ಸಂಸದರಾಗಿರುವ ಸಸಿಕಾಂತ್ ಸೆಂಥಿಲ್, 2009ರಿಂದ 2019ರವರೆಗೆ ರಾಜ್ಯ ಸರ್ಕಾರದಲ್ಲಿ ಐಎಎಸ್ ಅಧಿಕಾರಿಯಾಗಿ ವಿವಿಧ ಹುದ್ದೆ ನಿಭಾಯಿಸಿದ್ದರು. ಐಎಎಸ್ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ 2020ರಲ್ಲಿ ಅವರು ಕಾಂಗ್ರೆಸ್ ಪಕ್ಷ ಸೇರಿ ಸಂಸದರಾಗಿದ್ದರು. 2019ರಲ್ಲಿ ರಾಜೀನಾಮೆ ನೀಡುವ ವೇಳೆ ಅವರು ದಕ್ಷಿಣ ಕನ್ನಡದ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. 2017ರಿಂದ ಅವರು ದಕ್ಷಿಣ ಕನ್ನಡದ ಜಿಲ್ಲಾಧಿಕಾರಿಯಾಗಿದ್ದರು.

## ವೀರೇಂದ್ರ ಹೆಗ್ಗಡೆ ಅವರ ಮೊದಲ ಪ್ರತಿಕ್ರಿಯೆ

ಇಡೀ ರಾಜ್ಯ ಮತ್ತು ದೇಶದ ಗಮನ ಸೆಳೆದಿರುವ ಧರ್ಮಸ್ಥಳ ಶವ ಹೂತಿಟ್ಟ ಪ್ರಕರಣ ಕುರಿತು ಶ್ರೀಕ್ಷೇತ್ರ ಧರ್ಮಾಧಿಕಾರಿ ಹಾಗೂ ರಾಜ್ಯಸಭಾ ಸದಸ್ಯ ಡಿ. ವೀರೇಂದ್ರ ಹೆಗ್ಗಡೆ ಅವರು ತಮ್ಮ ಮೊದಲ ಅಧಿಕೃತ ಪ್ರತಿಕ್ರಿಯೆಯನ್ನು ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಈ ಪ್ರಕರಣದ ಸುತ್ತಮುತ್ತ ಹಲವು ರೀತಿಯ ಊಹಾಪೋಹಗಳು, ಆರೋಪ-ಪ್ರತ್ಯಾರೋಪಗಳು ಹಾಗೂ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಅಪಪ್ರಚಾರದ ಹಿನ್ನೆಲೆಯಲ್ಲಿ ಹೆಗ್ಗಡೆ ಅವರ ಹೇಳಿಕೆ ವಿಶೇಷ ಮಹತ್ವ ಪಡೆದಿದೆ.

"ಧರ್ಮಸ್ಥಳದ ಬಗ್ಗೆ ಉದ್ದೇಶಪೂರ್ವಕವಾಗಿ ಗೊಂದಲ ಮೂಡಿಸಲು ಕೆಲವರು ಯತ್ನಿಸುತ್ತಿದ್ದಾರೆ. ಇದೊಂದು ಧಾರ್ಮಿಕ ನಂಬಿಕೆಗಳ ಕೇಂದ್ರವಾಗಿದ್ದು, ಜನರು ಶ್ರದ್ಧೆಯಿಂದ ಬರುವ ಸ್ಥಳ. ಅಂತಹ ಸ್ಥಳದ ಹೆಸರನ್ನು ಹಾಳು ಮಾಡಲು ಅಸತ್ಯ ಹಾಗೂ ಆಧಾರರಹಿತ ಆರೋಪಗಳನ್ನು ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಾವು ಯಾವುದೇ ರೀತಿಯ ತನಿಖೆಗೆ ಸಂಪೂರ್ಣ ಬೆಂಬಲ ನೀಡುತ್ತೇವೆ. ಎಸ್‌ಐಟಿ ನಡೆಸುತ್ತಿರುವ ತನಿಖೆಯಲ್ಲಿ ನಿಜ ಸತ್ಯ ಬಹಿರಂಗವಾಗುತ್ತದೆ ಎಂಬ ವಿಶ್ವಾಸ ನನಗಿದೆ."

ಅವರು ಮುಂದುವರಿಸಿದರು: "ನಾವು ಏನನ್ನೂ ಮುಚ್ಚಿಡಿಲ್ಲ. ಸರ್ಕಾರ ಅಥವಾ ತನಿಖಾ ಸಂಸ್ಥೆಗಳು ಯಾವುದೇ ರೀತಿಯ ತನಿಖೆ ನಡೆಸಲು ಬಯಸಿದರೂ ನಾವು ಸ್ವಾಗತಿಸುತ್ತೇವೆ. ತನಿಖೆಯ ಅಂತಿಮ ವರದಿ ಬರುವವರೆಗೆ ನಾವು ಕಾಯುತ್ತಿದ್ದೇವೆ. ನಮ್ಮ ಸಹಕಾರವನ್ನು ಯಾವ ಹಂತದಲ್ಲೂ ಯಾರೂ ಅನುಮಾನಿಸಬೇಕಾಗಿಲ್ಲ," ಎಂದರು.

ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಸುಳ್ಳು ಸುದ್ದಿಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಹೆಗ್ಗಡೆ ಹೇಳಿದರು: "ಕೆಲವರು ಸಾಮಾಜಿಕ ಮಾಧ್ಯಮಗಳನ್ನು ಉಪಯೋಗಿಸಿ ಯುವಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ದೇವಸ್ಥಾನ, ಧರ್ಮ ಮತ್ತು ನಂಬಿಕೆಗಳ ವಿರುದ್ಧ ಅಸತ್ಯ ಪ್ರಚಾರ ನಡೆಸಿ ಯುವಕರ ಮನಸ್ಸನ್ನು ಕಲುಷಿತಗೊಳಿಸುವ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ. ಇಂತಹ ಸುಳ್ಳು ಸಂದೇಶಗಳಿಂದ ಸಮಾಜದಲ್ಲಿ ಅಶಾಂತಿ ಸೃಷ್ಟಿಯಾಗುತ್ತಿದೆ, ಇದು ಅತ್ಯಂತ ಖೇದಕರ," ಎಂದರು.

ಇನ್ನೂ ಅವರು ತಮ್ಮ ಹೇಳಿಕೆಯಲ್ಲಿ ಸೇರಿಸಿದರು: "ಎಸ್‌ಐಟಿ ತನಿಖೆಯಿಂದ ನಮಗೆ ನಿರಾಳತೆ ಬಂದಿದೆ. ಎಲ್ಲಾ ಸತ್ಯ ಶೀಘ್ರದಲ್ಲೇ ಹೊರಬರುತ್ತದೆ. ಯಾವುದೂ ಮುಚ್ಚಿಡದೆ ತನಿಖೆ ನಡೆಯಲಿದೆ. ನನಗೆ ಇಡೀ ರಾಜ್ಯದಿಂದ ಕರೆಗಳು ಬರುತ್ತಿವೆ – ನೂರಾರು ಜನ ಕಾರು, ಬಸ್‌ಗಳಲ್ಲಿ ಧರ್ಮಸ್ಥಳಕ್ಕೆ ಬಂದು ನಮ್ಮನ್ನು ಬೆಂಬಲಿಸುವುದಾಗಿ ಹೇಳುತ್ತಿದ್ದಾರೆ. ಕೆಲವರು 500 ಜನ ಬರ್ತೇವೆ, ಕೆಲವರು 1000 ಜನರ ತಂಡವಾಗಿ ಬರ್ತೇವೆ ಎಂದು ತಿಳಿಸಿದ್ದಾರೆ. ಆದರೆ ನಾನು ಅವರಿಗೆ ಬೇಡ ಎಂದು ಮನವಿ ಮಾಡುತ್ತಿದ್ದೇನೆ. ಜನರ ಭಾವನೆಗಳನ್ನು ನಾನು ಅರ್ಥಮಾಡಿಕೊಳ್ಳುತ್ತೇನೆ, ಆದರೆ ಕಾನೂನಿನ ಪ್ರಕ್ರಿಯೆಯ ಮೇಲೆ ನಮಗೆ ನಂಬಿಕೆ ಇದೆ. ನಿಜವಾದ ಅಪರಾಧಿಗಳನ್ನು ಪತ್ತೆಹಚ್ಚಿ ಶಿಕ್ಷಿಸಲಾಗುವುದು ಎಂಬ ವಿಶ್ವಾಸ ನನಗಿದೆ," ಎಂದು ಸ್ಪಷ್ಟಪಡಿಸಿದರು.

## ಲಿಂಗಾಯತ ನಾಯಕರ' ಶಕ್ತಿ ಪ್ರದರ್ಶನ: ಜಾತಿ ಸಮೀಕ್ಷೆ ಕುರಿತು ಚರ್ಚೆಮೊದಲ ಪ್ರತಿಕ್ರಿಯೆ



ಬೆಂಗಳೂರು: ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ನಿವಾಸದಲ್ಲಿ ವೀರಶೈವ-ಲಿಂಗಾಯತ ಸಮುದಾಯದ ಕಾಂಗ್ರೆಸ್ ನಾಯಕರು ಶಕ್ತಿ ಪ್ರದರ್ಶನ ನಡೆಸಿದ್ದಾರೆ. ಸಮುದಾಯದ ಸಚಿವರು ಹಾಗೂ ಶಾಸಕರು ಮುಂಬರುವ ಜಾತಿ ಗಣತಿ ಮತ್ತು ಅದರ ಪರಿಣಾಮಗಳ ಕುರಿತು ಚರ್ಚಿಸಿದ್ದಾರೆ.

ಸಭೆಯಲ್ಲಿ ಸಚಿವರಾದ ಎಂ.ಬಿ.ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ಶಿವಾನಂದ ಪಾಟೀಲ, ಶರಣಬಸಪ್ಪ ದರ್ಶನಾಪುರ, ಶರಣಪ್ರಕಾಶ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯ ಸಚೇತಕ ಅಶೋಕ ಪಟ್ಟಣ, ಶಾಸಕರಾದ ಬಿ.ಆರ್.ಪಾಟೀಲ, ಲಕ್ಷ್ಮಣ ಸವದಿ ಸೇರಿದಂತೆ 34ಕ್ಕೂ ಹೆಚ್ಚು ಜನಪ್ರತಿನಿಧಿಗಳು ಭಾಗವಹಿಸಿದ್ದರು. ವೀರಶೈವ ಲಿಂಗಾಯತ ಮಹಾಸಭಾದ ಶಂಕರ ಬಿದರಿ ಅವರೂ ಚರ್ಚೆಯಲ್ಲಿ ಪಾಲ್ಗೊಂಡಿದ್ದರು ಎನ್ನಲಾಗಿದೆ.

ವೀರಶೈವ-ಲಿಂಗಾಯತ ಸಮುದಾಯದ ನಿಜವಾದ ಜನಸಂಖ್ಯೆಯನ್ನು ದೃಢೀಕರಿಸುವ ಅಗತ್ಯವನ್ನು ನಾಯಕರು ಒತ್ತಿ ಹೇಳುವುದರೊಂದಿಗೆ, ರಾಜ್ಯ ಸರ್ಕಾರದ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ಕೆಲವರು ತಮ್ಮ ಜಾತಿ ಪ್ರಮಾಣ ಪತ್ರದಲ್ಲಿ ವೀರಶೈವ ಎಂದು ನೋಂದಾಯಿಸಿಕೊಂಡಿದ್ದರೆ, ಮತ್ತೆ ಕೆಲವರು ಲಿಂಗಾಯಿತ ಎಂದು, ಇನ್ನೂ ಕೆಲವರು ತಮ್ಮ ಉಪಜಾತಿಯನ್ನು ಮಾತ್ರ ನೋಂದಾಯಿಸಿಕೊಂಡಿದ್ದಾರೆ. ಇದು ಸಮುದಾಯದ ಜನಸಂಖ್ಯೆಯನ್ನು ಕಡಿಮೆ ಸಂಖ್ಯೆಗೆ ಕಾರಣವಾಗಬಹುದು ಎಂಬ ಕಳವಳ ವ್ಯಕ್ತಪಡಿಸಲಾಯಿತು. ನಿಖರವಾದ ಪ್ರಾತಿನಿಧ್ಯ ಖಾತ್ರಿ ಮತ್ತು ಮೀಸಲಾತಿ ಪ್ರಯೋಜನ ಕಾಪಾಡಿಕೊಳ್ಳಲು ಸಾಮೂಹಿಕ ಪ್ರಯತ್ನಗಳ ಅಗತ್ಯವಿದೆ. ತಮ್ಮ ಸ್ಥಾನಗಳ ಸಂಖ್ಯೆಯಲ್ಲಿ ದುರ್ಬಲತೆ ತಡೆಯಲು ವೀರಶೈವ-ಲಿಂಗಾಯತ ಸಮಾಜದ ಎಲ್ಲಾ ಉಪ ಸಮುದಾಯಗಳಲ್ಲಿ ಏಕತೆಯನ್ನು ಕಾಪಾಡಬೇಕು ಎಂದು ನಾಯಕರು ಹೇಳಿದ್ದಾರೆ.

ಈ ಸವಾಲುಗಳನ್ನು ಎದುರಿಸಲು ಅಖಿಲ ಭಾರತ ವೀರಶೈವ ಮಹಾಸಭಾ ಆಗಸ್ಟ್ 22 ರಂದು ಸಮಾಲೋಚನಾ ಸಮಾವೇಶ ನಡೆಸುವುದಾಗಿ ಘೋಷಿಸಿದೆ. ಸಮುದಾಯದ ಮುಂದಿನ ಕಾರ್ಯಚಟುವಟಿಕೆಗಳನ್ನು ನಿರ್ಧರಿಸಲು ವೀರಶೈವ-ಲಿಂಗಾಯತ ನಾಯಕರ ಪಕ್ಷಾತೀತ ಸಭೆಯನ್ನು ಆ ದಿನ ಕರೆಯಲಾಗಿದೆ.

ಜಾತಿ ಗಣತಿ ವರದಿಯ ನಂತರ ಪ್ರಬಲ ಲಿಂಗಾಯತ ಸಮುದಾಯದಲ್ಲಿ ವ್ಯಾಪಕ ಅಸಮಾಧಾನ ಹೆಚ್ಚಿದೆ. ಶ್ರೀಶೈಲ ಪೀಠದ ಚನ್ನಸಿದ್ಧರಾಮ ಶಿವಾಚಾರ್ಯರಂತಹ ಲಿಂಗಾಯತ ಧರ್ಮೀಯರು ಮತ್ತು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಂತಹ ನಾಯಕರು ಸಮೀಕ್ಷೆಯನ್ನು ಪ್ರಶ್ನಿಸಿದ್ದಾರೆ. ಈ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾತಿ ಸಮೀಕ್ಷೆಯನ್ನು

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

# ಗ್ರಾ,ಪಂ ಪಂಚಾಯತ್ ಗಳಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಕರವೇ ಪ್ರತಿಭಟನೆ..!

### ಇ-ಸ್ವತ್ತು-ನರೇಗಾ ಯೋಜನೆಗಳಲ್ಲಿ ಭ್ರಷ್ಟಾಚಾರ ಆರೋಪ

ಕೃಷ್ಣರಾಜಪೇಟೆ ವರದಿ: ತಾಲ್ಲೂಕು ಗ್ರಾ.ಪಂ ಕಚೇರಿಗಳಲ್ಲಿ ಇ-ಸ್ವತ್ತು ನರೇಗಾ ಯೋಜನೆಗಳಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ ಅಂಥವರ ವಿರುದ್ಧ ಶಿಸ್ತು ಕ್ರಮ ಹಾಗೂ ತಾ.ಪಂ ಯ ವಾಣಿಜ್ಯ ಸಂಕಿರಣಗಳನ್ನ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಕ್ರಮಬದ್ಧವಾಗಿ ನಡೆಸಬೇಕು ಎಂದು ಆಗ್ರಹಿಸಿ ತಾ.ಪಂ ಕಚೇರಿಗೆ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ವೇಣು ಪಟ್ಟಣದ ತಾ.ಪಂ ಕಾರ್ಯಾಲಯ ಪ್ರಾಂಗಣದಲ್ಲಿ ಸುಮಾರು 45 ಕ್ಕೂ ಹೆಚ್ಚು ವಾಣಿಜ್ಯ ಮಳಿಗೆಗಳು ಇದ್ದು, ಕಳೆದ ಬಾರಿ ನಿಯಮ ಬಾಹಿರವಾಗಿ ಬಹಿರಂಗ ಹರಾಜು ಮಾಡದೇ 3 ತಿಂಗಳು ಬಾಡಿಗೆ ಮನ್ನಮಾಡಿ, ಸಭೆಯಲ್ಲಿ ನಿಯಮವನ್ನು ಉಲ್ಲಂಘಿಸಿ ಮೊದಲಿನಿಂದ ಬಾಡಿಗೆ ಇದ್ದವರ ಅನುಸಾರವಾಗಿಯೇ ನಡೆದುಕೊಂಡು ಬಂದಿದೆ. ಈ ವಿಚಾರವಾಗಿ 4 ಬಾರಿ ದೂರು ಕೊಟ್ಟರೂ ಯಾವ ರೀತಿಯ ಕಾನೂನು ಮುಖಾಂತರ ವಾಣಿಜ್ಯ ಮಳಿಗೆಗಳ ಹರಾಜು ಪ್ರಕ್ರಿಯೆಯನ್ನು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರವಾಗಿ ಬಹಿರಂಗ ಹರಾಜಿನ ಬಗ್ಗೆ ಪ್ರತಿಯೊಬ್ಬ ಜನಸಾಮಾನ್ಯರಿಗೆ ಮಾಹಿತಿ ನೀಡಿ ಕರಪತ್ರಗಳನ್ನು ಹಂಚಿ, ಬಹಿರಂಗಗೊಳಿಸಿದ ನಂತರ ಹರಾಜು ಪ್ರಕ್ರಿಯೆ ನಡೆಸಬೇಕು ಆದರೆ ಹಲವು ವರ್ಷಗಳಿಂದ ಉಳ್ಳವರಿಗೆ ಕೈ ಗೊಂಬೆಯಾಗಿ ತಾಲೂಕು ಪಂಚಾಯಿತಿ ಅಧಿಕಾರಿಗಳುಕೂಡ ಕಾರ್ಯನಿರ್ವಹಿಸುತ್ತಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿ.

ತಾಲ್ಲೂಕಿನ ಕೆಲ ಗ್ರಾಮ ಪಂಚಾಯಿತಿಯಲ್ಲಿ 15 ನೇ ಹಣಕಾಸನ್ನು ದುರುಪಯೋಗ ಪಡಿಸಿಕೊಂಡು ಕಳಪೆ ಗುಣಮಟ್ಟದ ಸಾಮಾಗ್ರಿಗಳನ್ನು ಖರೀದಿಸಿರುವುದು ಮತ್ತು ಕಾಮಗಾರಿಗಳನ್ನು ನಡೆಸಿ ನರೇಗಾ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸಿದ ಕಾರ್ಮಿಕರಿಗೆ ಹಣ ಬಿಡುಗಡೆ ಮಾಡದೇ ಅವರಿಗೆ ಬೇಕಾದ ಜಾಬ್ ಕಾರ್ಡ್ ಗಳಿಗೆ ಹಣ ಬಿಡುಗಡೆ ಮಾಡಿ ಕಳಪೆ ಗುಣಮಟ್ಟದ ಕಾಮಗಾರಿಗಳನ್ನು ನಿಯಮಬಾಹಿರವಾಗಿ ನಿರ್ವಹಿಸಿದ್ದಾರೆ

ಪಂಚಾಯತ್ ರಾಜ್ ಅಧಿನಿಯಮಗಳನ್ನು ಉಲ್ಲಂಘನೆ ಮಾಡಿ ಹಲವಾರು ಇ ಸ್ವತ್ತುಗಳನ್ನು ಮಾಡಿರುವ ಮುರುಕನಹಳ್ಳಿ ಗ್ರಾಮ ಪಂಚಾಯಿತಿಯ ಪಿಡಿಓ ಲೋಕಾಯುಕ್ತ ಬಂದ ಸಂದರ್ಭದಲ್ಲಿ ಪಿಡಿಓ



ಮತ್ತು ಬಿಲ್ ಕಲೆಕ್ಟರ್ ರೈತನಿಂದ ಹಣ ಪಡೆಯುವಾಗಲೇ ಸಿಕ್ಕಿಬಿದ್ದು ಇವರ ಬಗ್ಗೆ ಇಲಾಖೆಯ ತನಿಖೆ ನಡೆಸಿ ಪಿಡಿಓಗೆ ಲೋಕಾಯುಕ್ತ ನ್ಯಾಯಾಲಯದಿಂದ ತೀರ್ಪು ನೀಡುವ ತನಕ ತಮ್ಮ ಇಲಾಖೆಯಲ್ಲಿ ಯಾವುದೇ ರೀತಿಯ ಹುದ್ದೆಗಳನ್ನು ನೀಡಬಾರದೆಂದು ಒತ್ತಾಯಿಸಿದ ವೇಣು ಅವರು ಅಧಿನಿಯಮ ಬಾಹಿರವಾಗಿ ನಡೆದಿರುವ ಕಾಮಗಾರಿಗಳು ಮತ್ತು ಸರ್ಕಾರದ ಹಣ ದುರುಪಯೋಗವಾಗಿರುವುದನ್ನು ತನಿಖೆ ನಡೆಸಿ ತಪ್ಪಿಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಣ ಅಧಿಕಾರಿ ಸುಷ್ಮಾ ರವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರವೇ ತಾಲ್ಲೂಕು ಅಧ್ಯಕ್ಷ ಅಗ್ರಹಾರಬಾಚಳ್ಳಿ ಶ್ರೀನಿವಾಸ್,ಪದವಿ ಘಟಕದ ಅಧ್ಯಕ್ಷ ಚೇತನ್ ಕುಮಾರ್,ಜಿಲ್ಲಾ ಉಪಾಧ್ಯಕ್ಷ ಶಿವಪ್ರಸಾದ್,ಯುವ ಘಟಕದ ಅಧ್ಯಕ್ಷ ಆನಂದ್, ಹೊನ್ನೇನಹಳ್ಳಿ ಸ್ವಾಮಿಗೌಡ, ಕಿಕ್ಕೇರಿ ಹೋಬಳಿ ಅಧ್ಯಕ್ಷ ಪದ್ಮನಾಭ, ಕಸಬಾ ಹೋಬಳಿ ಅಧ್ಯಕ್ಷ ಅನಿಲ್ ಗೌಡ, ಕಾಮನಹಳ್ಳಿ ತಿಮ್ಮೇಗೌಡ, ಹೊಸಹೊಲು ಸಂಜೀವ್, ಅಜಯ್, ಯವ ಘಟಕ ಕಾರ್ಯದರ್ಶಿ ಮನು, ಸಂಚಲಕ ಜಹಿರ್, ಮಂಜು, ಹರೀಶ್, ನಂಜುಂಡ, ಚೇತನ್, ನಜೀರ್, ಸಮೀರ್ ಸೇರಿದಂತೆ ಉಪಸ್ಥಿತರಿದ್ದರು.

# ಕತ್ತಿ ಕುಟುಂಬದ ಭದ್ರಕೋಟೆಗೆ ಲಗ್ಗೆಯಿಡಲು ಜಾರಕಿಹೊಳಿ ಸಜ್ಜು!

ಬೆಳಗಾವಿ: ಬೆಳಗಾವಿಯಲ್ಲಿ ಸಹಕಾರಿ ವಲಯವು ಎರಡು ಪ್ರಬಲ ರಾಜಕೀಯ ಕುಟುಂಬಗಳಾದ ಗೋಕಾಕ್‌ನ ಜಾರಕಿಹೊಳಿ ಮತ್ತು ಹುಕ್ಕೇರಿಯ ಕತ್ತಿ ಕುಟುಂಬದ ನಡುವೆ ತೀವ್ರ ಜಟಾಪಟಿಗೆ ಸಾಕ್ಷಿಯಾಗುತ್ತಿದೆ. ಏಕೆಂದರೆ ಎರಡೂ ಕುಟುಂಬಗಳು ಜಿಲ್ಲೆಯ ಆರ್ಥಿಕ ಮತ್ತು ರಾಜಕೀಯ ಭೂದೃಶ್ಯವನ್ನು ದೀರ್ಘಕಾಲದಿಂದ ರೂಪಿಸಿರುವ ಪ್ರಮುಖ ಸಹಕಾರಿ ಸಂಸ್ಥೆಗಳ ಮೇಲೆ ಕಣ್ಣಿಟ್ಟಿವೆ.

ಸಂಕೇಶ್ವರದ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ (HRECS)ಮತ್ತು ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ (BDCC) ಬ್ಯಾಂಕ್. ಈ ಮೂರೂ ಸಂಸ್ಥೆಗಳು ಐತಿಹಾಸಿಕವಾಗಿ ಕತ್ತಿ ಕುಟುಂಬದ ಹಿಡಿತದಲ್ಲಿದ್ದು, ಜಾರಕಿಹೊಳಿ ಸಹೋದರರು ಮೂರು ಪ್ರಮುಖ ಕ್ಷೇತ್ರಗಳತ್ತ ಗಮನ ಹರಿಸಿದ್ದಾರೆ.

ಕರ್ನಾಟಕದ ಪ್ರಮುಖ ಸಹಕಾರಿ ಬ್ಯಾಂಕುಗಳಲ್ಲಿ ಒಂದಾದ ಬಿಡಿಸಿಸಿ ಬ್ಯಾಂಕ್ ದಶಕಗಳಿಂದ ಬಲವಾದ ಕಾರ್ಯಕ್ಷಮತೆ ಮತ್ತು ಪ್ರಭಾವ ಹೊಂದಿದೆ. ಬೆಳಗಾವಿಯಾದ್ಯಂತದ ಪ್ರಮುಖ ಶಾಸಕರು ಮತ್ತು ನಾಯಕರನ್ನು ತನ್ನ ಮಂಡಳಿಗೆ ಸೆಳೆಯುತ್ತಿದೆ. 1980 ರ ದಶಕದ ಆರಂಭದಲ್ಲಿ ಸಹಕಾರಿ ನಾಯಕ ಅಪ್ಪಣ್ಣಗೌಡ ಪಾಟೀಲ್ ಸ್ಥಾಪಿಸಿದ ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ, ಜಿಲ್ಲೆಯ ಸಹಕಾರಿ ಚಳುವಳಿಗೆ ಪ್ರಮುಖ ಪ್ರಚೋದನೆಯನ್ನು ನೀಡಿತು, ನಂತರ ಅದು ಯವರ ನಿಯಂತ್ರಣಕ್ಕೆ ಒಳಪಟ್ಟಿತು. ಕರ್ನಾಟಕದ ಸಹಕಾರಿ ಕ್ಷೇತ್ರದ ಭೀಷ್ಮ ಎಂದೇ ಪೂಜಿಸಲ್ಪಡುವ ಪಾಟೀಲ್ ಸ್ಥಾಪಿಸಿದ HRECS, ದಶಕಗಳಿಂದ ಕತ್ತಿ ಕುಟುಂಬದ ಹಿಡಿತದಲ್ಲಿದೆ.

ಆದರೆ ಇತ್ತೀಚೆಗೆ ಅಧಿಕಾರದ ಸಮತೋಲನ ಬದಲಾಗುತ್ತಿದೆ. ಶಾಸಕ ಬಾಲಚಂದ್ರ ಜಾರಕಿಹೊಳಿ ನೇತೃತ್ವದ ಗುಂಪು ಇತ್ತೀಚೆಗೆ ಮಾಜಿ ಸಂಸದ ರಮೇಶ್ ಕತ್ತಿ ಅವರನ್ನು ಬಿಡಿಸಿಸಿ ಬ್ಯಾಂಕಿನ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸುವಲ್ಲಿ ಯಶಸ್ವಿಯಾಗಿದೆ, ಇದು ಜಾರಕಿಹೊಳಿಯವರ ಬೆಳೆಯುತ್ತಿರುವ ಪ್ರಾಬಲ್ಯದ ಬಗ್ಗೆ ಸೂಚಿಸುತ್ತದೆ. ಅಕ್ಟೋಬರ್ 19 ರಂದು ನಡೆಯಲಿರುವ ಚುನಾವಣೆಯಲ್ಲಿ ಬ್ಯಾಂಕಿನ ಮಂಡಳಿಯನ್ನು ತನ್ನ ಕೈವಶ ಲು ಈ ಗುಂಪು ಸಜ್ಜಾಗಿದೆ.

ಇದೇ ವೇಳೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹುಕ್ಕೇರಿ ರಾಜಕೀಯಕ್ಕೆ ಒತ್ತು ನೀಡುತ್ತಿದ್ದಾರೆ, ಹಿರಣ್ಯಕೇಶಿ ಕಾರ್ಖಾನೆ ಮತ್ತು HRECS ಅನ್ನು ಪುನರುಜ್ಜೀವನಗೊಳಿಸಲು ಮತ್ತು ಅಭಿವೃದ್ಧಿಪಡಿಸಲು ಪ್ರತಿಜ್ಞೆ ಮಾಡುತ್ತಿದ್ದಾರೆ. ಕಳೆದ ವರ್ಷ ಮಾಜಿ ಸಚಿವ ಉಮೇಶ್ ಕತ್ತಿ ನಿಧನರಾದ ನಂತರ ಕತ್ತಿ ಕುಟುಂಬದ ಹಿಡಿತ ದುರ್ಬಲಗೊಂಡಿದೆ, ಹೀಗಾಗಿ ಈ ಪ್ರದೇಶದಲ್ಲಿ ಕತ್ತಿ ಕುಟುಂಬ ದೀರ್ಘಕಾಲದಿಂದ ಹೊಂದಿದ್ದ ರಾಜಕೀಯ ಪ್ರಭಾವವನ್ನು ಸಹ ಕಳೆದುಕೊಂಡಿದೆ.

ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಲು ಮುಂದಾಗಿರುವ ಜಾರಕಿಹೊಳಿ ಕತ್ತಿ ಪ್ರಾಬಲ್ಯವಿದ್ದ ಪ್ರಬಲ ಸಂಸ್ಥೆಗಳನ್ನು ವಶಪಡಿಸಿಕೊಳ್ಳಲು "ಸಹಕಾರಿ ಯುದ್ಧ" ಆರಂಭಿಸಿದ್ದಾರೆ ಎಂದು ಹಲವರು ಅಭಿಪ್ರಾಯಪಟ್ಟಿದ್ದಾರೆ.

ರಮೇಶ್ ಕತ್ತಿ ಜಾರಕಿಹೊಳಿ ಅವರನ್ನು ಹುಕ್ಕೇರಿಗೆ ಕಾಲಿಡದಂತೆ ಎಚ್ಚರಿಕೆ ನೀಡಿದ್ದಾರೆ. ಶಾಸಕ ನಿಖಿಲ್ ಕತ್ತಿ ಸೇರಿದಂತೆ ಅವರ ಕುಟುಂಬವು ಕ್ಷೇತ್ರವನ್ನು "ನಾಲ್ಕು ಕಡೆಯಿಂದ" ಕಾಪಾಡುತ್ತದೆ ಎಂದು ಘೋಷಿಸಿದರು. ಇದಕ್ಕೆ ತಿರುಗೇಟು ನೀಡಿರುವ ಸತೀಶ್ ಜಾರಕಿಹೊಳಿ, ರಮೇಶ್ "ಮಧ್ಯಾಹ್ನ ಎಂದಿನಂತೆ ತಡವಾಗಿ ಎಚ್ಚರಗೊಳ್ಳುತ್ತಾರೆ, ಆದರೆ ಅಷ್ಟರಲ್ಲಿ ಮುಂಜಾನೆಯ ಕೆಲಸವನ್ನು ಮುಗಿಸಲು ನಾನು ಹುಕ್ಕೇರಿಯಲ್ಲಿರುತ್ತೇನೆ ಎಂದು ವ್ಯಂಗ್ಯವಾಡಿದರು.

ಸಕ್ಕರೆ ಕಾರ್ಖಾನೆ ಮತ್ತು HRECS ಎರಡೂ ನಿರೀಕ್ಷೆಯಂತೆ ಪ್ರಗತಿ ಸಾಧಿಸಲು ವಿಫಲವಾಗಿವೆ ಸತೀಶ್ ಹೇಳಿದ್ದಾರೆ. ನಾವು ದಿವಂಗತ ಅಪ್ಪಣ್ಣಗೌಡ ಪಾಟೀಲ್ ಅವರ ಹೆಸರಿನಲ್ಲಿ HRECS ಚುನಾವಣೆಗಳಲ್ಲಿ ಸ್ಪರ್ಧಿಸುತ್ತಿದ್ದೇವೆ ಮತ್ತು ನಾವು ಜನರಿಗೆ ನಿಜವಾದ ಸೇವೆಯನ್ನು ನೀಡುತ್ತೇವೆ ಎಂದು ಅವರು ಪ್ರತಿಪಾದಿಸಿದರು, ಹುಕ್ಕೇರಿಯ ಸಹಕಾರಿ ವಲಯದ ಮೂಲಕ ಈಗ ಬದಲಾವಣೆಯ ಗಾಳಿ ಬೀಸುತ್ತಿದೆ ಎಂದು ಹೇಳಿದರು.

# ಎಸ್‌ಐಟಿ ರಚಿಸಲು ಯಾರ ಒತ್ತಡ ಇತ್ತು,ಸಿಎಂ ಸ್ಪಷ್ಟಪಡಿಸಬೇಕು- ವಿಜಯೇಂದ್ರ



ಬೆಂಗಳೂರು: ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದ ಆರೋಪಗಳ ತನಿಖೆಗಾಗಿ ವಿಶೇಷ ತನಿಖಾ ತಂಡ(ಎಸ್‌ಐಟಿ) ರಚಿಸಲು ತಮ್ಮ ಮೇಲೆ ಯಾರು ಒತ್ತಡ ಹೇರಿದರು ಎಂಬುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಬೇಕೆಂದು ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಸೋಮವಾರ ಒತ್ತಾಯಿಸಿದ್ದಾರೆ.

ಹಲವಾರು ಶವಗಳನ್ನು ತಾನೇ ಹೂತು ಹಾಕಿರುವುದಾಗಿ ಆರೋಪಿಸಿರುವ ಅನಾಮಧೇಯ ದೂರುದಾರನ ಹೇಳಿಕೆಯ ಆಧಾರದ ಮೇಲೆ ಶವಗಳನ್ನು ಹೊರತೆಗೆಯುವ ಕಾರ್ಯ ನಡೆಯುತ್ತಿರುವ ಮಧ್ಯೆಯೇ ಬಿಜೆಪಿ ರಾಜ್ಯಾಧ್ಯಕ್ಷರ ಈ ಹೇಳಿಕೆ ಬಂದಿದೆ.

ವಿಜಯೇಂದ್ರ ಅವರ ಪ್ರಕಾರ, ಮಂಜುನಾಥಸ್ವಾಮಿ ದೇವಸ್ಥಾನವಿರುವ ದೇವಾಲಯ ಪಟ್ಟಣ ಧರ್ಮಸ್ಥಳದ ವಿರುದ್ಧ "ದೊಡ್ಡ ಪಿತೂರಿ" ನಡೆಯುತ್ತಿದೆ. ಮುಖ್ಯಮಂತ್ರಿಗಳು ಎರಡು ವಾರಗಳ ಹಿಂದೆ ತಾವು ಎಸ್‌ಐಟಿ ರಚಿಸುವುದಿಲ್ಲ ಎಂದು ಹೇಳಿದ್ದರು. ಆದರೆ ಮರುದಿನವೇ ಅವರು ತಮ್ಮ ನಿಲುವು ಬದಲಾಯಿಸಿ ಎಸ್‌ಐಟಿ ರಚಿಸಿದರು ಎಂದರು. ಎಸ್‌ಐಟಿ ರಚಿಸಲು ಸಿದ್ದರಾಮಯ್ಯ ಅವರ ಮೇಲೆ ಯಾರು ಒತ್ತಡ ಹೇರಿದರು? ಇದು ಕರ್ನಾಟಕದ ಜನರಿಗೆ ಮುಖ್ಯಮಂತ್ರಿಯೇ ಉತ್ತರಿಸಬೇಕು ಎಂದು ವಿಜಯೇಂದ್ರ ಅವರು ಸುದ್ದಿಗಾರರಿಗೆ ತಿಳಿಸಿದರು.

ಧರ್ಮಸ್ಥಳ ವಿಷಯದ ಬಗ್ಗೆ ಮಾತನಾಡಲು ಒತ್ತಡ ಹೇರಲಾಗಿದೆ ಎಂದು ಮುಸುಕುಧಾರಿ ದೂರುದಾರ ಹೇಳಿದ್ದಾರೆ ಎಂದು ಆರೋಪಿಸಿರುವ ವಿಜಯೇಂದ್ರ, ಇದು ಪ್ರಕರಣದ ವಿಶ್ವಾಸಾರ್ಹತೆಯ ಬಗ್ಗೆ ಗಂಭೀರ ಅನುಮಾನಗಳನ್ನು ಹುಟ್ಟುಹಾಕಿದೆ ಎಂದಿದ್ದಾರೆ.

ಈ ಘಟನೆಯ ಹಿಂದೆ "ದೊಡ್ಡ ಪಿತೂರಿ" ಇದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇತ್ತೀಚೆಗೆ ನೀಡಿದ್ದ ಹೇಳಿಕೆಯನ್ನು ಉಲ್ಲೇಖಿಸಿ, ಪ್ರಕರಣದಲ್ಲಿ ಭಾಗಿಯಾಗಿರುವವರ ಹೆಸರುಗಳನ್ನು ಬಹಿರಂಗಪಡಿಸುವಂತೆ ಒತ್ತಾಯಿಸಿದರು. ಎಸ್‌ಐಟಿ ತನಿಖೆ ನಡೆಸಿದ ರೀತಿ, ಸುಳ್ಳು ಪ್ರಚಾರವನ್ನು ಹರಡಿದ ರೀತಿ ಮತ್ತು ಅದು ರಾಜ್ಯ, ರಾಷ್ಟ್ರ, ಅಂತರರಾಷ್ಟ್ರೀಯ ಮಾಧ್ಯಮಗಳ ಗಮನ ಸೆಳೆದ ರೀತಿಯಿಂದ ಧರ್ಮಸ್ಥಳದ ಕೋಟ್ಯಂತರ ಭಕ್ತರಿಗೆ ನೋವುಂಟಾಗಿದೆ ಎಂದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.